www.freedomtvlive.com

# ಫ್ರೀಡಂ ನ್ಯೂಸ್

# ಬಾಗಲಕೋಟೆ ಉಪಚುನಾವಣೆ




## ದಾಖಲೆಯಿಲ್ಲದ 32.50 ಲಕ್ಷ ರೂಪಾಯಿ ನಗದು ಜಪ್ತಿ

ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಹಿನ್ನೆಲೆಯಲ್ಲಿ ಜಾರಿಯಲ್ಲಿರುವ ಮಾದರಿ ನೀತಿ ಸಂಹಿತೆಯ ನಡುವೆಯೇ ಭಾರಿ ಪ್ರಮಾಣದ ನಗದು ಪತ್ತೆಯಾಗಿದೆ. ಯಾವುದೇ ಅಧಿಕೃತ ದಾಖಲೆಗಳಿಲ್ಲದೆ ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಒಟ್ಟು 32.50 ಲಕ್ಷ ರೂಪಾಯಿ ಹಣವನ್ನು ಚುನಾವಣಾ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಜಿಲ್ಲೆಯ ಹೊನ್ನಾಕಟ್ಟಿ ಚೆಕ್‌ಪೋಸ್ಟ್‌ನಲ್ಲಿ ಈ ಕಾರ್ಯಾಚರಣೆ ನಡೆದಿದ್ದು, ಅಕ್ರಮ ಹಣ ಸಾಗಾಟಕ್ಕೆ ಬ್ರೇಕ್ ಹಾಕಲಾಗಿದೆ. ಸ್ಥಿರ ಕಣ್ಗಾವಲು ತಂಡದ ಅಧಿಕಾರಿಗಳು ವಾಹನ ತಪಾಸಣೆ ನಡೆಸುತ್ತಿದ್ದ ವೇಳೆ ಈ ನಗದು ಪತ್ತೆಯಾಗಿದೆ. ಕೆಎ 36 ಪಿ 3991ನೋಂದಣಿ ಸಂಖ್ಯೆಯ ಮಾರುತಿ ಎರ್ಟಿಗಾ ಕಾರಿನಲ್ಲಿ ಈ ಹಣವನ್ನು ಸಾಗಿಸಲಾಗುತ್ತಿತ್ತು. ಕಾರನ್ನು ತಡೆದ ಅಧಿಕಾರಿಗಳು ಪರಿಶೀಲಿಸಿದಾಗ ದೊಡ್ಡ ಮೊತ್ತದ ಹಣ ಪತ್ತೆಯಾಗಿದ್ದು, ಅದಕ್ಕೆ ಸಂಬಂಧಿಸಿದ ಯಾವುದೇ ಪೂರಕ ದಾಖಲೆಗಳು ಲಭ್ಯವಿಲ್ಲದ ಕಾರಣ ಇಡೀ ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಹೆಚ್.ವೈ. ಮೇಟಿ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಏಪ್ರಿಲ್ 9 ರಂದು ಉಪಚುನಾವಣೆ ನಡೆಯಲಿದೆ ಎಂದು ಘೋಷಿಸಲಾಗಿದೆ. ಚುನಾವಣೆ ಘೋಷಣೆಯಾದಾಗಿನಿಂದಲೂ ಕ್ಷೇತ್ರದಲ್ಲಿ ಕಟ್ಟುನಿಟ್ಟಿನ ನಿಗಾ ವಹಿಸಲಾಗುತ್ತಿದ್ದು, ಮತದಾರರ ಮೇಲೆ ಪ್ರಭಾವ ಬೀರಲು ಹಣ ಸಾಗಾಟ ಮಾಡುವ ಸಾಧ್ಯತೆಗಳ ಹಿನ್ನೆಲೆಯಲ್ಲಿ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಲಾಗಿದೆ.

ರಾಜಕೀಯವಾಗಿ ಈ ಉಪಚುನಾವಣೆ ಭಾರೀ ಕುತೂಹಲ ಮೂಡಿಸಿದ್ದು, ಈಗಾಗಲೇ ಬಿಜೆಪಿ ವತಿಯಿಂದ ವೀರಣ್ಣ ಚರಂತಿಮಠ ಅವರನ್ನು ಅಭ್ಯರ್ಥಿಯನ್ನಾಗಿ ಅಧಿಕೃತವಾಗಿ ಘೋಷಿಸಲಾಗಿದೆ. ಆದರೆ ಕಾಂಗ್ರೆಸ್ ಪಕ್ಷದಿಂದ ಯಾರನ್ನು ಕಣಕ್ಕಿಳಿಸಲಾಗುತ್ತದೆ ಎಂಬುದು ಇನ್ನು ನಿಗೂಢವಾಗಿದ್ದು, ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ. ಈ ನಡುವೆ ಇಷ್ಟೊಂದು ದೊಡ್ಡ ಮೊತ್ತದ ಹಣ ಸಿಕ್ಕಿರುವುದು ಕ್ಷೇತ್ರದಲ್ಲಿ ಸಂಚಲನ ಮೂಡಿಸಿದೆ.

ಚುನಾವಣಾ ಅಧಿಕಾರಿಗಳು ಈ ಪ್ರಕರಣದ ಬಗ್ಗೆ ಹೆಚ್ಚಿನ ತನಿಖೆ ನಡೆಸುತ್ತಿದ್ದು, ವಶಪಡಿಸಿಕೊಂಡ ಹಣದ ಮೂಲ ಮತ್ತು ಅದನ್ನು ಯಾರಿಗೆ ತಲುಪಿಸಲು ಕೊಂಡೊಯ್ಯಲಾಗುತ್ತಿತ್ತು ಎಂಬ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ. ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾಗ ಸಾರ್ವಜನಿಕರು ಸೂಕ್ತ ದಾಖಲೆಗಳಿಲ್ಲದೆ ಹೆಚ್ಚಿನ ನಗದು ಸಾಗಿಸದಂತೆ ಅಧಿಕಾರಿಗಳು ಮತ್ತೊಮ್ಮೆ ಎಚ್ಚರಿಕೆ ನೀಡಿದ್ದಾರೆ.

# ಮೂಡಬಿದ್ರೆ ಇನ್ಸ್‌ಪೆಕ್ಟರ್ ಸಂದೇಶ್‌ಗೆ ಬಿಗ್ ಶಾಕ್..!



ಮೂಡಬಿದ್ರೆ ಇನ್ಸ್‌ಪೆಕ್ಟರ್ ಸಂದೇಶ್ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಾಗಿದೆ. ಅವರ ಮೇಲಿನ ಲೈಂಗಿಕ ಕಿರುಕುಳ ಆರೋಪ ಸುಳ್ಳು ಎಂದು ವರದಿ ಬಂದಿದ್ದರೂ, ಬೆಳ್ತಂಗಡಿ ವೇಣೂರು ಠಾಣೆಯಲ್ಲಿ ಶಿಕ್ಷಕಿ ನೀಡಿದ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಲಾಗಿದೆ. 2018-2023ರ ಅವಧಿಯಲ್ಲಿ ಅತ್ಯಾಚಾರ ನಡೆದಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಆ ಮೂಲಕ ಈ ಹಿಂದೆ ವೇಣೂರು ಪೊಲೀಸ್ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಆಗಿದ್ದ ಸಂದೇಶ್‌ಗೆ ಹೊಸ ಸಂಕಷ್ಟ ಎದುರಾಗಿದೆ.

ಮಹಿಳೆಯರಿಗೆ ಲೈಂಗಿಕ ಕಿರುಕುಳ ಆರೋಪ ಸುಳ್ಳು ಎಂದು ಪೊಲೀಸ್ ವರದಿ ಹೇಳಿದ್ದ ನಡುವೆಯೇ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ಇನ್ಸ್‌ಪೆಕ್ಟರ್ ಸಂದೇಶ್‌ಗೆ ಬಿಗ್ ಶಾಕ್ ಸಿಕ್ಕಿದೆ. ಬೆಳ್ತಂಗಡಿ ತಾಲೂಕಿನ ವೇಣೂರು ಠಾಣೆಯಲ್ಲಿ ಸಂದೇಶ್ ವಿರುದ್ಧ ಸಂತ್ರಸ್ತೆ ಶಿಕ್ಷಕಿ ನೀಡಿದ ದೂರಿನ ಮೇರೆಗೆ ಅತ್ಯಾಚಾರ ಆರೋಪದಡಿ ಎಫ್‌ಐಆರ್ ದಾಖಲಾಗಿದೆ. 2018 ರಿಂದ 2023ರವರೆಗೆ ಶಿಕ್ಷಕಿ ಮನೆಗೆ ಹೋಗಿ ಬೆದರಿಸಿ ಅತ್ಯಾಚಾರ ಮಾಡಿರುವುದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ.

2020ರಲ್ಲಿ ಸಂದೇಶ್ ಬೆಳ್ತಂಗಡಿ ಸರ್ಕಲ್ ವ್ಯಾಪ್ತಿಯಲ್ಲಿರುವ ವೇಣೂರು ಪೊಲೀಸ್ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಆಗಿದ್ದರು. ಹೀಗಾಗಿ ವೇಣೂರು ಠಾಣಾ ವ್ಯಾಪ್ತಿಯಲ್ಲೇ ಅತ್ಯಾಚಾರ ಆರೋಪದಡಿ ಸೆಕ್ಷನ್ 376(2)(a)(1), 376(2)(n), 384, 506ರಡಿ ಕೇಸ್ ದಾಖಲಾಗಿದೆ. ಸಂದೇಶ್ ವಿರುದ್ಧ ಇಬ್ಬರು ಮಹಿಳೆಯರು ಮಾಡಿದ್ದ ಲೈಂಗಿಕ ಕಿರುಕುಳ ಆರೋಪ ಸುಳ್ಳು ಎಂದು ಪೊಲೀಸ್ ವರದಿ ಹೇಳಿದೆ. ಮಾಧ್ಯಮಗಳ ಮುಂದೆ ಬಂದಿದ್ದ ಆ ಮಹಿಳೆಯರಿಗೆ ಕಿರುಕುಳ ನೀಡಿಲ್ಲ. ಪ್ರಚೋದನೆಗೆ ಒಳಪಟ್ಟು ಪಿಐ ವಿರುದ್ಧ ಸುಳ್ಳು ಆರೋಪ ಮಾಡಿದ್ದಾರೆ. ಮಹಿಳೆಯರ ಆರೋಪ ಸುಳ್ಳು ಮತ್ತು ಪ್ರೇರಿತ ಎಂದು ಸಾಬೀತಾಗಿದೆ ಎಂದು ನಿನ್ನೆಯಷ್ಟೇ ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಮಾಹಿತಿ ನೀಡಿದ್ದರು. ಆ ಬೆನ್ನಲ್ಲೇ ಈಗ ಸಂದೇಶ್ ವಿರುದ್ಧ ಅತ್ಯಾಚಾರ ದೂರು ದಾಖಲಾಗಿದೆ.

ಸಂತ್ರಸ್ತೆ ಮಹಿಳೆ ಆರೋಪ ಸಂಬಂಧ ಕೆಲ ಆಡಿಯೋ ವಿಡಿಯೋಗಳ ಬಯಲಿಗೆ ಬರುತ್ತಿದ್ದಂತೆಯೇ ಇನ್ಸ್‌ಪೆಕ್ಟರ್ ವಿರುದ್ಧದ ಪ್ರಕರಣದ ತನಿಖೆ ನಡೆಸಿ ವರದಿ ನೀಡುವ ಹೊಣೆಯನ್ನು ಎಸಿಪಿ ಶ್ರೀಕಾಂತ್‌ಗೆ ನೀಡಲಾಗಿತ್ತು. ಪ್ರಕರಣ ಸಂಬಂಧ ಶಾಸಕ ಉಮಾನಾಥ್ ಕೋಟ್ಯಾನ್ ಗೃಹ ಸಚಿವರನ್ನ ಭೇಟಿ ಮಾಡಿ ಮಾಡಿ ಸಂದೇಶ್‌ರನ್ನು ಅಮಾನತ್ತಿನಲ್ಲಿಟ್ಟು ತನಿಖೆ ಮಾಡುವಂತೆ ಮನವಿ ಮಾಡಿದ್ದರು. ಅಲ್ಲದೇ ಈ ಬಗ್ಗೆ ಮಹಿಳಾ ಆಯೋಗ ಸಹ ಸುಮಟೋ ಕೇಸ್ ದಾಖಲಿಸಿಕೊಂಡು, ಪ್ರಕರಣದ ವರದಿ ನೀಡುವಂತೆ ಮಂಗಳೂರು ಪೊಲೀಸ್ ಆಯುಕ್ತರಿಗೆ ಪತ್ರ ಬರೆದಿತ್ತು. ಈ ಎಲ್ಲಾ ಬೆಳವಣಿಗೆ ಬಳಿಕ ಇನ್ಸ್‌ಪೆಕ್ಟರ್ ಸಂದೇಶ ಅವರನ್ನು ಅಮಾನತು ಕೂಡ ಮಾಡಲಾಗಿತ್ತು.

ಫ್ರೀಡಂ ನ್ಯೂಸ್

22-ಮಾರ್ಚ್ -2026 www.freedomtvlive.com

# ಹಾರ್ಮುಜ್ ಜಲಸಂಧಿ ಸಂಘರ್ಷ

## ಇರಾನ್‌ಗೆ 48 ಗಂಟೆಗಳ ಗಡುವು ನೀಡಿದ ಡೊನಾಲ್ಡ್ ಟ್ರಂಪ್



ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ದೇಶಕ್ಕೆ ತೀವ್ರ ಎಚ್ಚರಿಕೆಯನ್ನು ನೀಡಿದ್ದು, ಮುಂದಿನ 48 ಗಂಟೆಗಳ ಒಳಗೆ ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಮುಕ್ತಗೊಳಿಸಬೇಕು ಎಂದು ಗಡುವು ವಿಧಿಸಿದ್ದಾರೆ. ವಿಶ್ವದ ಒಟ್ಟು ತೈಲ ಪೂರೈಕೆಯ ಐದನೇ ಒಂದು ಭಾಗದಷ್ಟು ತೈಲವು ಇದೇ ಮಾರ್ಗದ ಮೂಲಕ ಸಾಗಣೆಯಾಗುತ್ತಿದ್ದು, ಹಡಗು ಸಂಚಾರಕ್ಕೆ ಅಡ್ಡಿಪಡಿಸುತ್ತಿರುವ ಇರಾನ್‌ನ ಕ್ರಮವನ್ನು ಟ್ರಂಪ್ ಖಂಡಿಸಿದ್ದಾರೆ. ಒಂದು ವೇಳೆ ನಿಗದಿತ ಸಮಯದೊಳಗೆ ಇರಾನ್ ಈ ಜಲಸಂಧಿಯನ್ನು ತೆರೆಯದಿದ್ದರೆ, ಆ ದೇಶದ ಪ್ರಮುಖ ವಿದ್ಯುತ್ ಸ್ಥಾವರಗಳನ್ನು ನಾಶಪಡಿಸುವುದಾಗಿ ನೇರ ಬೆದರಿಕೆ ಹಾಕಿದ್ದಾರೆ.

ಟ್ರಂಪ್ ಅವರ ಈ ಎಚ್ಚರಿಕೆಗೆ ಇರಾನ್ ಸೇನೆಯು ಅಷ್ಟೇ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ಸಂಘರ್ಷಕ್ಕೆ ತಾವು ಸಿದ್ಧರಿದ್ದೇವೆ ಎಂಬ ಸಂದೇಶ ರವಾನಿಸಿದೆ. ಇರಾನ್‌ನ ಇಂಧನ ಮೂಲಸೌಕರ್ಯಗಳ ಮೇಲೆ ಯಾವುದೇ ದಾಳಿ ನಡೆದರೆ, ಈ ಪ್ರದೇಶದಲ್ಲಿರುವ ಅಮೆರಿಕಕ್ಕೆ ಸೇರಿದ ಎಲ್ಲಾ ಇಂಧನ ಘಟಕಗಳು, ಮಾಹಿತಿ ತಂತ್ರಜ್ಞಾನ ವ್ಯವಸ್ಥೆಗಳು ಮತ್ತು ಉಪ್ಪುನೀರಿನ ನಿರ್ಮೂಲನ ಮೂಲಸೌಕರ್ಯಗಳನ್ನು ಗುರಿಯಾಗಿಸಿ ತಿರುಗೇಟು ನೀಡುವುದಾಗಿ ಇರಾನ್ ಮಿಲಿಟರಿ ಎಚ್ಚರಿಸಿದೆ. ಇರಾನಿನ ಮಿಲಿಟರಿಯ ಕಾರ್ಯಾಚರಣೆಯ ಕಮಾಂಡ್ ಖತಮ್ ಅಲ್-ಅನ್ಬಿಯಾ ಅವರು ಈ ಕುರಿತು ಅಮೆರಿಕದ ಆಡಳಿತಕ್ಕೆ ಕೌಂಟರ್ ನೀಡಿದ್ದಾರೆ.

ಜಾಗತಿಕ ತೈಲ ಸಾಗಣೆಗೆ ಹಾರ್ಮುಜ್ ಜಲಸಂಧಿಯು ಅತ್ಯಂತ ಪ್ರಮುಖವಾದ ಜಲಮಾರ್ಗವಾಗಿದ್ದು, ಇದರ ಮೇಲೆ ಉಂಟಾಗಿರುವ ತಡೆ ವಿಶ್ವದ ಇಂಧನ ಮಾರುಕಟ್ಟೆಯಲ್ಲಿ ತಲ್ಲಣ ಸೃಷ್ಟಿಸಿದೆ. ಜಗತ್ತಿನ ಒಟ್ಟು ತೈಲ ಸರಬರಾಜಿನ ಸುಮಾರು ಶೇಕಡಾ 20 ರಷ್ಟು ಭಾಗ ಈ ಮಾರ್ಗದ ಮೂಲಕವೇ ಸಾಗಬೇಕಿರುವುದರಿಂದ, ಪ್ರಸ್ತುತ ಉಂಟಾಗಿರುವ ಉದ್ವಿಗ್ನ ಪರಿಸ್ಥಿತಿಯು ಜಾಗತಿಕ ಆರ್ಥಿಕತೆಯ ಮೇಲೆ ಗಂಭೀರ ಪರಿಣಾಮ ಬೀರುವ ಆತಂಕ ಮೂಡಿಸಿದೆ. ಉಭಯ ದೇಶಗಳ ನಡುವಿನ ಈ ಮಾತಿನ ಚಕಮಕಿ ಇದೀಗ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

# ರೈತರಲ್ಲಿ ಆತಂಕ: ಬೆಳ್ಳಂ ಬೆಳಿಗ್ಗೆ ಕಾಣಿಸಿಕೊಂಡ ಕಾಡಾನೆಗಳ ಹಿಂಡು

**ಬೆಂಗಳೂರು ದಕ್ಷಿಣ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಬ್ರಹ್ಮಣಿಪುರ ಕೆರೆಯಲ್ಲಿ ಬೆಳ್ಳಂ ಬೆಳಿಗ್ಗೆ ಕಾಡಾನೆಗಳ ಹಿಂಡು ಪ್ರತ್ಯಕ್ಷವಾಗಿದ್ದು, ರೈತರಲ್ಲಿ ಆತಂಕ ಸೃಷ್ಟಿಸಿವೆ. ಈಗಾಗಲೇ ಚನ್ನಪಟ್ಟಣ ತಾಲೂಕಿನಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು, ಇತ್ತೀಚೆಗೆ ಒಂದು ಆನೆಯನ್ನ ಸೆರೆ ಹಿಡಿಯಲಾಗಿತ್ತು. ಇದರಿಂದ ಜನರು ಕೊಂಚ ನಿಟ್ಟುಸಿರು ಬಿಡುವ ನಡುವೆಯೇ ಇದೀಗ ಗ್ರಾಮದಲ್ಲಿ ಮತ್ತೆ ಮೂರು ಕಾಡಾನೆಗಳು ಕಾಣಿಸಿಕೊಂಡಿವೆ. ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿದ್ದು, ಕಾಡಾನೆಗಳನ್ನು ಹಿಮ್ಮೆಟ್ಟಿಸುವ ಯತ್ನ ನಡೆಸಿದ್ದಾರೆ.**



# ಹದಿಹರೆಯದವರ ಹಾದಿ ತಪ್ಪುತ್ತಿದೆಯೇ?



**14ರ ಬಾಲಕನಿಂದ ಇಬ್ಬರು ಬಾಲಕಿಯರು ಗರ್ಭಿಣಿ..!**

ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಒಂದು ವಿಡಿಯೋ ಇಡೀ ಸಮಾಜವೇ ತಲೆತಗ್ಗಿಸುವಂತೆ ಮಾಡಿದೆ. ಕೇವಲ 14 ವರ್ಷದ ಬಾಲಕನೊಬ್ಬ ಇಬ್ಬರು ಅಪ್ರಾಪ್ತ ಬಾಲಕಿಯರ ಗರ್ಭಧಾರಣೆಗೆ ಕಾರಣನಾಗಿರುವ ಘಟನೆ ವರದಿಯಾಗಿದೆ. ಇದು ಕೇವಲ ಒಂದು ಅಪರಾಧವಲ್ಲ, ಬದಲಾಗಿ ನಮ್ಮ ಶಿಕ್ಷಣ ವ್ಯವಸ್ಥೆ ಮತ್ತು ಪೋಷಣೆಯಲ್ಲಿನ ದೊಡ್ಡ ವೈಫಲ್ಯವನ್ನು ಎತ್ತಿ ತೋರಿಸುತ್ತಿದೆ.

ಈ ಘಟನೆ ನಮಗೆ ಕಲಿಸುವ ಪಾಠಗಳೇನು?

1. ಲೈಂಗಿಕ ಶಿಕ್ಷಣದ ತುರ್ತು ಅಗತ್ಯತೆ:

ಬಹಳಷ್ಟು ಪೋಷಕರು ಮತ್ತು ಶಾಲೆಗಳಲ್ಲಿ ಲೈಂಗಿಕತೆಯ ಬಗ್ಗೆ ಮಾತನಾಡುವುದನ್ನು ಇಂದಿಗೂ 'ನಿಷೇಧ' (Taboo) ಎಂದು ಭಾವಿಸಲಾಗುತ್ತದೆ. ಆದರೆ, ಮಕ್ಕಳಿಗೆ ಸರಿಯಾದ ವಯಸ್ಸಿನಲ್ಲಿ ಪ್ರಜನನ ಆರೋಗ್ಯ ಮತ್ತು ದೈಹಿಕ ಬದಲಾವಣೆಗಳ ಬಗ್ಗೆ ಶಾಸ್ತ್ರೀಯ ಮಾಹಿತಿ ನೀಡದಿದ್ದರೆ, ಅವರು ತಪ್ಪು ಹಾದಿ ಹಿಡಿಯುವ ಸಾಧ್ಯತೆ ಹೆಚ್ಚು.

2. ಪೋಷಕರ ಮತ್ತು ಮಕ್ಕಳ ನಡುವಿನ ಸಂವಹನ:

ಹದಿಹರೆಯದ ವಯಸ್ಸಿನಲ್ಲಿ ಮಕ್ಕಳ ದೇಹದಲ್ಲಿ ಹಾರ್ಮೋನ್ ಬದಲಾವಣೆಗಳಿಂದಾಗಿ ಕುತೂಹಲಗಳು ಹೆಚ್ಚಿರುತ್ತವೆ. ಈ ಹಂತದಲ್ಲಿ ಪೋಷಕರು ಸ್ನೇಹಿತರಂತೆ ಅವರೊಂದಿಗೆ ಮಾತನಾಡಬೇಕು. ಸರಿಯಾದ ಮಾರ್ಗದರ್ಶನ ಸಿಗದಿದ್ದಾಗ ಮಕ್ಕಳು ಇಂಟರ್ನೆಟ್ ಅಥವಾ ತಪ್ಪು ಮೂಲಗಳಿಂದ ಮಾಹಿತಿ ಪಡೆದು ಅನಾಹುತ ಮಾಡಿಕೊಳ್ಳುತ್ತಾರೆ.

3. ಸಾಮಾಜಿಕ ಜಾಲತಾಣಗಳ ಪ್ರಭಾವ:

ವಿದೇಶದ ವಿಡಿಯೋ ಎಂದು ಹೇಳಲಾಗುತ್ತಿರುವ ಈ ಘಟನೆಯಲ್ಲಿ, ಇಂದಿನ ಡಿಜಿಟಲ್ ಯುಗದಲ್ಲಿ ಮಕ್ಕಳಿಗೆ ಸುಲಭವಾಗಿ ಲಭ್ಯವಾಗುತ್ತಿರುವ ಅಶ್ಲೀಲ ಸಾಹಿತ್ಯ ಮತ್ತು ಲೈಂಗಿಕ ವಿಷಯಗಳು ಅವರ ಮನಸ್ಸಿನ ಮೇಲೆ ಎಂತಹ ಕೆಟ್ಟ ಪರಿಣಾಮ ಬೀರುತ್ತಿವೆ ಎಂಬುದು ಸ್ಪಷ್ಟವಾಗುತ್ತದೆ.

# ಗಾಜಿನ ಗೋಪುರ ಬಂಗಾರದ ಕಳಶ

**ಇಸ್ಕಾನ್ ಬಗ್ಗೆ ನಿಮಗರಿಯದ ರಹಸ್ಯಗಳು..!**



ಬೆಂಗಳೂರು: ರಾಜಾಜಿನಗರದಲ್ಲಿರುವ ಇಸ್ಕಾನ್ ದೇವಾಲಯವು ಕೇವಲ ಒಂದು ಪ್ರಾರ್ಥನಾ ಮಂದಿರವಲ್ಲ, ಅದು ಆಧುನಿಕ ವಾಸ್ತುಶಿಲ್ಪ ಮತ್ತು ಪ್ರಾಚೀನ ಆಧ್ಯಾತ್ಮಿಕತೆಯ ಅದ್ಭುತ ಸಂಗಮ. 1997ರಲ್ಲಿ ಉದ್ಘಾಟನೆಗೊಂಡ ಈ ಮಂದಿರವು 'ಹರೇ ಕೃಷ್ಣ ಗಿರಿ' ಎಂಬ ಗುಡ್ಡದ ಮೇಲೆ ನೆಲೆಸಿದ್ದು, ವಿಶ್ವದ ಅತಿದೊಡ್ಡ ಇಸ್ಕಾನ್ ಸಂಕೀರ್ಣಗಳಲ್ಲಿ ಒಂದೆಂದು ಹೆಸರುವಾಸಿಯಾಗಿದೆ. ಇಲ್ಲಿನ ಭವ್ಯವಾದ ಗೋಪುರಗಳು, ಗಾಜಿನ ಕೆತ್ತನೆಗಳು ಮತ್ತು ವಿಶಾಲವಾದ ಪ್ರದಕ್ಷಿಣಾ ಪಥವು ಭಕ್ತರಿಗೆ ಮತ್ತು ಪ್ರವಾಸಿಗರಿಗೆ ಒಂದು ಅನನ್ಯ ಅನುಭವವನ್ನು ನೀಡುತ್ತವೆ. ಸುಮಾರು 7 ಎಕರೆ ಪ್ರದೇಶದಲ್ಲಿ ಹರಡಿಕೊಂಡಿರುವ ಈ ಮಂದಿರವು ಕಲ್ಲಿನ ಕೆತ್ತನೆ ಮತ್ತು ಬಂಗಾರದ ಲೇಪಿತ ಕಳಶಗಳಿಂದ ಕಂಗೊಳಿಸುತ್ತಾ ಬೆಂಗಳೂರಿನ ಪ್ರಮುಖ ಪ್ರವಾಸಿ ಆಕರ್ಷಣೆಯಾಗಿದೆ.

ಈ ದೇವಾಲಯದ ಒಂದು ಆಸಕ್ತಿದಾಯಕ ಸಂಗತಿಯೆಂದರೆ ಇಲ್ಲಿನ 17 ಮೀಟರ್ ಎತ್ತರದ ಬಂಗಾರದ ಲೇಪಿತ ಧ್ವಜಸ್ತಂಭ . ಇದು ಭಾರತದ ಅತಿ ಎತ್ತರದ ಧ್ವಜಸ್ತಂಭಗಳಲ್ಲಿ ಒಂದಾಗಿದ್ದು, ದೇವಾಲಯದ ವೈಭವವನ್ನು ಎತ್ತಿ ತೋರಿಸುತ್ತದೆ. ಅಲ್ಲದೆ, ಮಂದಿರದ ಒಳಭಾಗದ ಸೀಲಿಂಗ್‌ಗಳಲ್ಲಿ ಶ್ರೀಕೃಷ್ಣನ ಲೀಲೆಗಳನ್ನು ಬಿಂಬಿಸುವ ಸುಂದರವಾದ ವರ್ಣಚಿತ್ರಗಳನ್ನು ಬಿಡಿಸಲಾಗಿದೆ. ಈ ಚಿತ್ರಗಳನ್ನು ಕೈಯಿಂದಲೇ ಬಿಡಿಸಲಾಗಿದ್ದು, ಇವುಗಳನ್ನು ನೋಡಲು ಎರಡು ಕಣ್ಣು ಸಾಲದು. ಇಲ್ಲಿನ ಮುಖ್ಯ ದೇವತೆಗಳಾದ ರಾಧಾ-ಕೃಷ್ಣರ ವಿಗ್ರಹಗಳನ್ನು ಅತ್ಯಂತ ಆಕರ್ಷಕವಾಗಿ ಅಲಂಕರಿಸಲಾಗುತ್ತದೆ, ಇದು ಭಕ್ತರಲ್ಲಿ ಭಕ್ತಿಯ ಪರಾಕಾಷ್ಠೆಯನ್ನು ಮೂಡಿಸುತ್ತದೆ.

ಇಸ್ಕಾನ್ ಬೆಂಗಳೂರು ಜಗತ್ಪ್ರಸಿದ್ಧ 'ಅಕ್ಷಯ ಪಾತ್ರ' ಫೌಂಡೇಶನ್‌ನ ಜನ್ಮಸ್ಥಳವಾಗಿದೆ. ಇಲ್ಲಿಂದಲೇ ಲಕ್ಷಾಂತರ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಒದಗಿಸುವ ಬೃಹತ್ ಯೋಜನೆಗೆ ಅಡಿಪಾಯ ಹಾಕಲಾಯಿತು. ಇಂದಿಗೂ ಮಂದಿರಕ್ಕೆ ಭೇಟಿ ನೀಡುವ ಪ್ರತಿಯೊಬ್ಬ ಭಕ್ತನಿಗೂ 'ಖಿಚಡಿ' ಪ್ರಸಾದವನ್ನು ಉಚಿತವಾಗಿ ನೀಡಲಾಗುತ್ತದೆ. ಅಲ್ಲದೆ, ಇಲ್ಲಿನ ತಾಂತ್ರಿಕ ವ್ಯವಸ್ಥೆಯು ಎಷ್ಟೊಂದು ಮುಂದುವರಿದಿದೆ ಎಂದರೆ, ಕೃಷ್ಣನ ಲೀಲೆಗಳನ್ನು ವಿವರಿಸಲು ಇಲ್ಲಿ ಅನಿಮೇಷನ್ ಮತ್ತು ಲೇಸರ್ ಶೋಗಳಂತಹ ಆಧುನಿಕ ಮಾಧ್ಯಮಗಳನ್ನು ಬಳಸಲಾಗುತ್ತದೆ. ಇದು ಯುವ ಪೀಳಿಗೆಯನ್ನು ಆಧ್ಯಾತ್ಮದತ್ತ ಸೆಳೆಯುವಲ್ಲಿ ಯಶಸ್ವಿಯಾಗಿದೆ.

ದೇವಾಲಯದ ಸಂಕೀರ್ಣದಲ್ಲಿರುವ 'ವೈಕುಂಠ ಹಿಲ್' ಎನ್ನುವುದು ಮತ್ತೊಂದು ವಿಶೇಷ ಆಕರ್ಷಣೆ. ಇದು ತಿರುಪತಿಯ ವೆಂಕಟೇಶ್ವರ ಸ್ವಾಮಿಯ ಪ್ರತಿರೂಪದಂತೆ ನಿರ್ಮಿಸಲಾದ ಸುಂದರವಾದ ಮಂದಿರವಾಗಿದೆ. ಬೆಂಗಳೂರಿನಲ್ಲೇ ಇದ್ದು ತಿರುಪತಿಯ ದರ್ಶನ ಪಡೆದ ಅನುಭವವನ್ನು ಈ ಭಾಗವು ನೀಡುತ್ತದೆ. ಇಲ್ಲಿನ ಪ್ರತಿಯೊಂದು ವಿಗ್ರಹ ಮತ್ತು ಕೆತ್ತನೆಯು ಅತ್ಯಂತ ನಿಖರತೆಯಿಂದ ಕೂಡಿದ್ದು, ವಾಸ್ತುಶಿಲ್ಪದ ಬಗ್ಗೆ ಆಸಕ್ತಿ ಇರುವವರಿಗೆ ಇದೊಂದು ದೊಡ್ಡ ಅಧ್ಯಯನ ಕೇಂದ್ರವೇ ಸರಿ.